**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

**ಸತ್ರ ಮೊಕದ್ದಮೆ ನಂಃ 43/2024**

| | | |
|---|---|---|
| ಸಾಕ್ಷಿದಾರರ ಹೆಸರು | - ಮುಬಾರಕ್ | ಪಿಡಬ್ಲ್ಯೂ- 04 |
| ತಂದೆಯ ಹೆಸರು | - ನಿಸಾರ್ ಅಹಮದ್ | ಸಿಡಬ್ಲ್ಯೂ -05 |
| ವಯಸ್ಸು | - 30 ವರ್ಷ | |
| ಉದ್ಯೋಗ | - ವ್ಯಾಪಾರ | |
| ವಾಸ ಸ್ಥಳ | - ಸಖರಾಯಪಟ್ಟಣ | |

ದಿನಾಂಕಃ 18-02-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಯಾರೆಂದು ನನಗೆ ಗೊತ್ತಿಲ್ಲ. ಚಾಸಾ.1, ಚಾಸಾ.11 ಮತ್ತು ಪ್ರಾಸಾ.3 ನನಗೆ ಗೊತ್ತಿಲ್ಲ.

**2.** ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು ದಿಃ 25-02-2023 ರಂದು ಅಮಾನತು ಪಂಚನಾಮೆಗೆ ಸಹಕರಿಸುವಂತೆ ಸಖರಾಯಪಟ್ಟಣ ಪೊಲೀಸರು ಸಾಕ್ಷಿಗೆ ನೀಡಿದ್ದಾರೆ ಎನ್ನಲಾದ ನೋಟೀಸ್ ಮತ್ತು ಅದೇ ದಿನ ಸಾಕ್ಷಿಯ ಸಮಕ್ಷಮ ಚಾಸಾ.1 ರವರು ಹಾಜರುಪಡಿಸಿದ ಬಟ್ಟೆಗಳನ್ನು ಪೊಲೀಸರು ಅಮಾನತುಪಡಿಸಿಕೊಂಡು ಜರುಗಿಸಿದ್ದಾರೆ ಎನ್ನಲಾದ ಅಮಾನತ್ತು ಪಂಚನಾಮೆಯಾಗಿದ್ದು, ಪಂಚನಾಮೆಯನ್ನು ಈಗಾಗಲೇ ಕ್ರಮವಾಗಿ ನಿಪಿ.5 ಎಂದು

ಗುರತಿಸಲಾಗಿದ್ದು, ನೋಟೀಸನ್ನು ಈಗ ನಿಪಿ.7 ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.5(ಬಿ) ಮತ್ತು ನಿಪಿ.7(ಎ) ಎಂದು ಗುರುತಿಸಲಾಯಿತು.

**3.** ಈಗ್ಗೆ 3 ವರ್ಷಗಳ ಹಿಂದೆ ಸದರಿ ಸಹಿಗಳನ್ನು ಸಖರಾಯಪಟ್ಟಣ ಪೊಲೀಸ್ ಠಾಣೆಯಲ್ಲಿ ಪೊಲೀಸರು ಹೇಳಿದ ಮೇರೆಗೆ ಮಾಡಿದ್ದೆನು, ಆದರೆ ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ. ನಾನು ಸಹಿ ಮಾಡಿರುವ ದಾಖಲೆಗಳಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಮತ್ತು ಅದನ್ನು ಪೊಲೀಸರು ನನಗೆ ಓದಿ ಹೇಳಿಲ್ಲ. ನನ್ನನ್ನು ಹೊರತುಪಡಿಸಿ ಸದರಿ ದಾಖಲೆಗೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಅಮಾನತು ಪಡಿಸಿಕೊಂಡಿಲ್ಲ.

4. ಸಾಕ್ಷಿಗೆ ಒಂದು ಫೋಟೋವನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಫೋಟೋವನ್ನು ಈಗಾಗಲೇ ನಿಪಿ.6 ಎಂದು ಗುರುತಿಸಲಾಗಿದೆ. ಪೊಲೀಸರು ಹೇಳಿದ ಮೇರೆಗೆ ಸದರಿ ಫೋಟೋಗೆ ನಿಂತುಕೊಂಡನು. ಆದರೆ ಸದರಿ ಫೋಟೋವನ್ನು ಯಾವ ವಿಚಾರಕ್ಕೆ ತೆಗೆದುಕೊಳ್ಳಲಾಗಿದೆ ಎಂದು ನನಗೆ ಗೊತ್ತಿಲ್ಲ.ಸದರಿ ಫೋಟೋದಲ್ಲಿ ಈ ದಿನ ನ್ಯಾಯಾಲಯಕ್ಕೆ ಬಂದಿರುವ ಪ್ರಾಸಾ.3 ರವರ ಇರುವಿಕೆ ಕಂಡುಬರುತ್ತದೆ, ಉಳಿರುವವರು ಯಾರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-</u>

**5.** ದಿಃ 25-02-2023 ರಂದು ಪಂಚನಾಮೆಗೆ ಸಹಕರಿಸುವಂತೆ ಸಖರಾಯಪಟ್ಟಣ ಪೊಲೀಸರು ನಿಮಗೆ ನಿಪಿ.7 ರಂತೆ ನೋಟೀಸನ್ನು ಜಾರಿ ಮಾಡಿದ್ದಾರೆ ಎಂದರೆ ಸರಿಯಲ್ಲ. ಅದಕ್ಕೆ ನೀವು ಒಪ್ಪಿಕೊಂಡು ಸಖರಾಯಪಟ್ಟಣ ಪೊಲೀಸ್ ಠಾಣೆಗೆ ಹಾಜರಾಗಿದ್ದೀರಿ ಎಂದರೆ ಸರಿಯಲ್ಲ. ಸದರಿ ಠಾಣೆಯಲ್ಲಿ ಚಾಸಾ.1 ರವರು ಹಾಜರಿದ್ದು ರಕ್ತದ ಕಲೆಗಳಾಗಿದ್ದ ತಿಳಿ ಗುಲಾಬಿ ಬಣ್ಣದ ಒಂದು ತುಂಬು ತೋಳಿನ ಶರ್ಟು ಮತ್ತು ನೀಲಿ ಬಣ್ಣದ ಕಾಚಾವನ್ನು ಪೊಲೀಸರಿಗೆ ನಮ್ಮ ಸಮಕ್ಷಮ ಹಾಜರುಪಡಿಸಿ ಅವುಗಳನ್ನು ತಾನು ಕೃತ್ಯ ನಡೆದ ಸಮಯದಲ್ಲಿ ಧರಿಸಿದ್ದಾಗಿ ತಿಳಿಸಿದ್ದಾರೆ ಎಂದರೆ ಸರಿಯಲ್ಲ. ನಂತರ ಪೊಲೀಸರು ಸದರಿ ಬಟ್ಟೆಗಳನ್ನು ನಮ್ಮ ಸಮಕ್ಷಮ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ನಿಪಿ.5 ರಂತೆ ಪಂಚನಾಮೆಯನ್ನು ಜರುಗಿಸಿ ಅಮಾನತುಪಡಿಸಿಕೊಂಡರು ಅದಕ್ಕೆ ನಮ್ಮ ಸಹಿಗಳನ್ನು ಪಡೆದಿದ್ದಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೊಲೀಸರು ನಿಪಿ.6 ರಂತೆ ಫೋಟೋವನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

6. ನಾನು 10 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ನನಗೆ ಕನ್ನಡ ಭಾಷೆಯಲ್ಲಿ ಓದಲು ಬರೆಯಲು ಬರುತ್ತದೆ. ನೀವು ಯಾವುದೇ ದಾಖಲೆಗೆ ಅದರಲ್ಲಿ ಬರೆದಿರುವುದನ್ನು ಓದಿ

ತಿಳಿದುಕೊಳ್ಳದೇ ಸಹಿ ಮಾಡುವುದಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ಆ ದಿನ ನಾನು ಕೆಲಸಕ್ಕೆ ಹೋಗುತ್ತಿದ್ದೆನು, ಪೊಲೀಸರು ನನ್ನನ್ನು ಕರೆದು ಸಹಿ ಪಡೆದುಕೊಂಡರು ಹಾಗಾಗಿ ಸದರಿ ದಾಖಲೆಯಲ್ಲಿ ಬರೆದಿದ್ದನ್ನು ನಾನು ಓದಲಿಲ್ಲ ಮತ್ತು ತಿಳಿದುಕೊಳ್ಳಲಿಲ್ಲ ಎನ್ನುತ್ತಾರೆ. ಪೊಲೀಸರು ನಿಮ್ಮ ಸಮಕ್ಷಮ ಚಾಸಾ.1 ರವರು ಹಾಜರುಪಡಿಸಿದ ಬಟ್ಟೆಗಳನ್ನು ಅಮಾನತು ಪಡಿಸಿಕೊಂಡು ನಿಪಿ.5 ರಂತೆ ಪಂಚನಾಮೆಯನ್ನು ಜರುಗಿಸಿದ್ದರೂ ಸಹ ಈಗ ಆರೋಪಿಯೊಂದಿಗೆ ಶಾಮೀಲಾಗಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಪಾಟೀ ಸವಾಲು: ಆರೋಪಿಯ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ